ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ ದಿನಾಂಕ : DATE 24/10/20

## ಸ್ಥಳೀಯ ಸಂಸ್ಥೆ, ಗ್ರಾ.ಪಂ ಜತೆಗೆ ಲೋಕಸಭೆ, ರಾಜ್ಯಸಭೆಗೆ ಫೈಟ್ ಜನವರಿವರೆಗೂ ಹಂತಹಂತವಾಗಿ ನಡೆಯಲಿದೆ ಮತಕದನ

# ಇನ್ನು ಚುನಾವಣಾ ಪರ್ವ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಆಡಳಿತಯಂತ್ರ ಮತ್ತು ರಾಜಕೀಯ ಪಕ್ಷಗಳ ಮೇಲೆ ಗಾಢ ಪರಿಣಾಮ ಬೀರಬಲ್ಲದೆಂದೇ ವಿಶ್ಲೇಷಿಸಲಾಗಿರುವ ರಾಜರಾಜೇಶ್ವರಿ ನಗರ ಹಾಗೂ ಶಿರಾ ಉಪ ಚುನಾವಣೆ ಬೆನ್ನಲ್ಲೇ ಕರೊನಾ ಸಂಕಟದ ನಡುವೆ ಸಾಲು ಸಾಲು ಚುನಾವಣೆಗಳಿಗೆ ಕರ್ನಾಟಕ ಸಜ್ಜಾಗಬೇಕಿದೆ.



**1** ಮಸ್ಕಿ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರ


**2** ಬೆಳಗಾವಿ ಲೋಕಸಭಾ ಕ್ಷೇತ್ರ

**3** 117 ಪುರಸಭೆ, 100 ಪಟ್ಟಣ ಪಂಚಾಯಿತಿ

**4** ಆರು ಸಾವಿರ ಗ್ರಾಮ ಪಂಚಾಯಿತಿ

ಮಸ್ಕಿ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರಕ್ಕೆ ಉಪ ಚುನಾವಣೆ, ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಹಾಗೂ ರಾಜ್ಯಸಭೆಯ 1 ಸ್ಥಾನಕ್ಕೂ ಶೀಘ್ರ ಚುನಾವಣೆ ಘೋಷಣೆಯಾಗುವ ಸಾಧ್ಯತೆ ಇದೆ. ಜತೆಗೆ, ಇಡೀ ರಾಜ್ಯಕ್ಕೆ ಅನ್ವಯವಾಗುವಂತೆ ಗ್ರಾಮ ಪಂಚಾಯಿತಿ ಚುನಾವಣೆ ನಡೆಯುವುದಿದೆ. ಪೌರಸಂಸ್ಥೆಗಳ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಗೂ ದಿನಾಂಕ ನಿಗದಿಯಾಗಿದೆ.

ಉಪ ಚುನಾವಣೆಗಳು ಹಾಗೂ ಗ್ರಾಪಂ ಚುನಾವಣೆ ವೇಳಾಪಟ್ಟಿ ನಿರ್ಧಾರ ವಾಗುತ್ತಿದ್ದಂತೆ ನೀತಿಸಂಹಿತೆ ಜಾರಿಯಾಗಲಿದೆ. ಇದರಿಂದ ಸಹಜವಾಗಿ ಹೊಸ ಅಭಿವೃದ್ಧಿ ಕಾಮಗಾರಿಗಳಿಗೆ ತಡೆಬೀಳಲಿವೆ. ಆಡಳಿತಯಂತ್ರ ಸಹ ನೀತಿಸಂಹಿತೆ ನೆಪಮಾಡುವುದರಿಂದ ಸರ್ಕಾರದ ಕೆಲಸ ಕಾರ್ಯಗಳಿಗೂ ಗ್ರಹಣ ಹಿಡಿಯಲಿದೆ. ಇನ್ನೊಂದು ಮಗ್ಗುಲಲ್ಲಿ ರಾಜಕೀಯ ಪಕ್ಷಗಳು ಸಂಪೂರ್ಣ ಕ್ರಿಯಾಶೀಲವಾಗಿ ತೊಡಗಿಕೊಳ್ಳಲಿವೆ. ಎರಡು ವಿಧಾನಸಭಾ ಕ್ಷೇತ್ರ ಮತ್ತು ಒಂದು ಲೋಕಸಭಾ ಕ್ಷೇತ್ರಕ್ಕೆ ನಡೆಯುವ ಉಪ ಚುನಾವಣೆ 3 ಪಕ್ಷಗಳಿಗೂ ಪ್ರತಿಷ್ಠೆ ಕಣ. ಪುಟ 5A



## ನಗರಸಭೆ ಸಮರ

**ಬೆಂಗಳೂರು:** ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ಚುನಾವಣೆಗೆ ಮುಹೂರ್ತ ನಿಗದಿಯಾಗುವುದರೊಂದಿಗೆ 276 ನಗರ ಸ್ಥಳೀಯ ಸಂಸ್ಥೆಗಳು ಕೊನೆಗೂ ಚುನಾಯಿತ ಪ್ರತಿನಿಧಿಗಳ ಅಧಿಕಾರಕ್ಕೆ ಒಳಪಡುವ ಕಾಲ ಸನ್ನಿಹಿತವಾಗಿದೆ. ನ.2 ರ ಒಳಗೆ 59 ನಗರಸಭೆ, ನ.10ರ ಒಳಗೆ 117 ಪುರಸಭೆ, 100 ಪ. ಪಂಚಾಯಿತಿ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆಗೆ ಚುನಾವಣೆ ನಡೆಸುವಂತೆ ನಗರಾಭಿವೃದ್ಧಿ ಇಲಾಖೆ ಸೂಚಿಸಿದೆ. 2018 ಆಗಸ್ಟ್‌ನಲ್ಲಿ 276 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದಿತ್ತು. ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ವಿಚಾರವಾಗಿ ಅನೇಕರು ಹೈಕೋರ್ಟ್ ಮೆಟ್ಟಿಲೇರಿದ್ದರು. ಪುಟ 5A

## ಗ್ರಾ.ಪಂ ಸಮರಕ್ಕಿಲ್ಲ ಅಡ್ಡಿ

### ಆಯೋಗಕ್ಕೆ ನಿರ್ಧಾರದ ಹೊಣೆ ನೀಡಿದ ಹೈಕೋರ್ಟ್



**ಬೆಂಗಳೂರು:** ರಾಜ್ಯದಲ್ಲಿ ಅವಧಿ ಪೂರ್ಣಗೊಂಡಿರುವ ಗ್ರಾಮ ಪಂಚಾಯಿತಿಗಳಿಗೆ ಚುನಾವಣೆ ನಡೆಸಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್, ಚುನಾವಣೆ ನಡೆಸುವ ಹೊಣೆಯನ್ನು ಚುನಾವಣಾ ಆಯೋಗಕ್ಕೆ ನೀಡಿ ತೀರ್ಪು ಕಾಯ್ದಿರಿಸಿದೆ. ಪ್ರಕರಣ ವಿಚಾರಣಾ ಹಂತದಲ್ಲಿರುವ ಹೊರತಾಗಿಯೂ, ಚುನಾವಣೆ ನಡೆಸುವ ಸಂಬಂಧ ನಿರ್ಧಾರ ಕೈಗೊಳ್ಳಲು ಚುನಾವಣಾ ಆಯೋಗಕ್ಕೆ ಮುಕ್ತ ಅವಕಾಶವಿದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಪುಟ 5A